# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 04.07.2011**

## ***ಪಾಲಿಕೆಯ ಸ.ಕಂ.ಅ-ಕೋರಮಂಗಲ ಉಪ ವಿಭಾಗ ಕಛೇರಿ ಸ್ಥಳಾಂತರ***

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ದಕ್ಷಿಣ ವಲಯದ ಸಹ ಕಂದಾಯ ಅಧಿಕಾರಿ (ಕೋರಮಂಗಲ) ಉಪ ವಿಭಾಗ ಕಛೇರಿಯು ಹಾಲಿ 2ನೇ ಅಡ್ಡರಸ್ತೆ, 4ನೇ ಮುಖ್ಯರಸ್ತೆ, ಎಲ್.ಐ.ಸಿ. ಕಾಲೋನಿ, ಜಯನಗರ, ಬೆಂಗಳೂರು ಇಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಈಗ ಈ ಕಛೇರಿಯನ್ನು ನಂ.128, 2ನೇ ಅಡ್ಡರಸ್ತೆ, 17ನೇ 'ಎ' ಮುಖ್ಯರಸ್ತೆ, 5ನೇ ಬ್ಲಾಕ್, ಕೋರಮಂಗಲ, (ಸುಖ್ ಸಾಗರ್ ಹೋಟೆಲ್ ಹಿಂಭಾಗ), ಬೆಂಗಳೂರು-560 095 ಇಲ್ಲಿಗೆ ಸ್ಥಳಾಂತರಿಸಲಾಗಿದೆ ಎಂದು ಜಂಟಿ ಆಯುಕ್ತರು (ದಕ್ಷಿಣ) ವಲಯ ರವರು ತಿಳಿಸಿರುತ್ತಾರೆ. ಸಂಬಂಧಪಟ್ಟ ಸಾರ್ವಜನಿಕರು ಇನ್ನು ಮುಂದೆ ಸ್ಥಳಾಂತರಗೊಂಡಿರುವ ಕಛೇರಿಯನ್ನು ತಮ್ಮ ಕೆಲಸ ಕಾರ್ಯಗಳಿಗೆ ಸಂಪರ್ಕಿಸಲು ಕೋರಿದೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 04.07.2011**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನರಸಿಂಹರಾಜ ಕಾಲೋನಿಯಲ್ಲಿ ಇರುವ ಹೆರಿಗೆ ಆಸ್ಪತ್ರೆಯನ್ನು ಹೈಟೆಕ್ ಆಸ್ಪತ್ರೆಯನ್ನಾಗಿ ಪರಿವರ್ತಿಸಲು ನಗರದ ಪ್ರತಿಷ್ಠಿತ ಆಸ್ಪತ್ರೆ ಮುಖ್ಯಸ್ಥರುಗಳೊಂದಿಗೆ ಒಡಂಬಡಿಕೆ ಮಾಡಿಕೊಳ್ಳಲಾಗುವುದೆಂದು ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ತಿಳಿಸಿದರು.

ಸ್ಥಳೀಯ ಪಾಲಿಕೆ ಸದಸ್ಯರಾದ ಶ್ರೀ ಕಟ್ಟೆ ಸತ್ಯನಾರಾಯಣ ರವರು ಮಾತನಾಡಿ, ಈ ಹೆರಿಗೆ ಆಸ್ಪತ್ರೆ 1962ರಲ್ಲಿ ಅಂದಿನ ಮೈಸೂರು ಮಹಾರಾಜರಿಂದ ಉದ್ಘಾಟನೆಗೊಂಡಿರುತ್ತದೆ. ಈ ಹಿಂದೆ ವರ್ಷಕ್ಕೆ 1500 ಕ್ಕೂ ಹೆಚ್ಚು ಹೆರಿಗೆಗಳು ಈ ಆಸ್ಪತ್ರೆಯಲ್ಲಿ ಆಗುತ್ತಿದ್ದವು. ಇತ್ತೀಚೆಗೆ ಈ ಪ್ರದೇಶದಲ್ಲಿ ಅನೇಕ ಖಾಸಗಿ ಆಸ್ಪತ್ರೆಗಳು ಬಂದಿರುವುದರಿಂದ ಮತ್ತು ಪಾಲಿಕೆಯ ಈ ಹೆರಿಗೆ ಆಸ್ಪತ್ರೆಗಳಲ್ಲಿ ಪ್ರಸೂತಿ ತಜ್ಞರ ಕೊರತೆ ಇರುವುದರಿಂದ ಇತ್ತೀಚೆಗೆ ಈ ಆಸ್ಪತ್ರೆಯಲ್ಲಿ ಕೇವಲ ಬೆರಳೆಣಿಕೆಯಷ್ಟು ಮಾತ್ರ ಹೆರಿಗೆಗಳು ಆಗುತ್ತಿವೆ. ಆದ್ದರಿಂದ ಈ ಆಸ್ಪತ್ರೆಯನ್ನು ಮೇಲ್ದರ್ಜೆಗೆರಿಸಿ, ಸ್ಥಳೀಯರಿಗೆ ಉತ್ತಮ ವೈದ್ಯಕೀಯ ಸೇವೆಯನ್ನು ಒದಗಿಸುವ ನಿಟ್ಟಿನಲ್ಲಿ ಖಾಸಗಿ ಆಸ್ಪತ್ರೆಯಲ್ಲಿ ಕಾರ್ಯನಿರ್ವಹಿಸುವ ಪ್ರತಿಭಾವಂತ ತಜ್ಞ ವೈದ್ಯರ ಸಹಕಾರ ಕೋರಿದೆ. ಅವರು ಇದಕ್ಕೆ ಒಪ್ಪಿಗೆ ಕೂಡಾ ನೀಡಿರುತ್ತಾರೆ ಎಂದು ತಿಳಿಸಿದರು.

ರಂಗದೊರೈ ಆಸ್ಪತ್ರೆಯ ನುರಿತ ತಜ್ಞರಾದ ಡಾ॥ ಲತಾವೆಂಕಟರಾಮನ್ ರವರು ಮಾತನಾಡಿ, ನಾವು ನುರಿತ ವೈದ್ಯರ ತಂಡವೊಂದು ರಚಿಸಲಿದ್ದು, ಅವರೆಲ್ಲರ ಸೇವೆಯನ್ನು ಈ ಆಸ್ಪತ್ರೆಗೆ ಆಗಮಿಸುವ ರೋಗಿಗಳಿಗೆ ನೀಡಲಾಗುವುದು. ಸ್ಪೆಷಾಲಿಟಿ ಮತ್ತು ಸೂಪರ್ ಸ್ಪೆಷಾಲಿಟಿ ಚಿಕಿತ್ಸೆಯನ್ನು ರೋಗಿಗಳಿಗೆ ನೀಡಿ, ಈ ಆಸ್ಪತ್ರೆಯನ್ನು ಉತ್ತಮ ದರ್ಜೆಗೆ ಏರಿಸಲು ಖಂಡಿತ ಪ್ರಯತ್ನಿಸುವುದಾಗಿ ತಿಳಿಸಿದರು.

ಪಾಲಿಕೆ ಆಯುಕ್ತರು ಮಾತನಾಡಿ, ನುರಿತ ವೈದ್ಯರ ಚಿಕಿತ್ಸೆಯಿಂದ ಸ್ಥಳೀಯ ಜನರಿಗೆ ಉತ್ತಮ ವೈದ್ಯಕೀಯ ಸೌಲಭ್ಯ ದೊರಕಲಿದೆ. ಪಾಲಿಕೆಯಿಂದ ಇವರಿಗೆ ಎಲ್ಲಾ ರೀತಿಯ ಸಹಕಾರ ನೀಡುವುದಾಗಿ ಮತ್ತು ಒಡಂಬಡಿಕೆ ಕೂಡಾ ಮಾಡಿಕೊಳ್ಳಲಾಗುವುದು ಎಂದು ತಿಳಿಸಿದರು. ಮತ್ತು ಶ್ರೀ ಪ್ರಸಾದ್ ಎಂಬ ಪ್ರಖ್ಯಾತ ವಾಸ್ತುಶಿಲ್ಪಿಯವರು ಈ ಆಸ್ಪತ್ರೆಗೆ ನೆಲಮಹಡಿ ಕಟ್ಟಡದ ಮೇಲೆ ಇನ್ನೊಂದು ಮಹಡಿ ಉಚಿತವಾಗಿ ನಿರ್ಮಿಸುವುದಾಗಿ ತಿಳಿಸಿದ್ದಾರೆ. ಇದರಿಂದ ಆಸ್ಪತ್ರೆಯಲ್ಲಿ ವಿವಿಧ ವೈದ್ಯಕೀಯ ಉಪಕರಣ ಅಳವಡಿಸಲು ಅನುಕೂಲವಾಗಲಿದೆ ಎಂದು ಆಯುಕ್ತರು ತಿಳಿಸಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**